ಗಂಗಾ ಕಲ್ಯಾಣ ಯೋಜನೆ

2765 (2983), ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) 2013–14ನೇ ಗಂಗಾ ಕಲ್ಯಾಣ ಯೋಜನೆಯಡಿ ಸರ್ಕಾರ ಮಂಜೂರು ಮಾಡಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು);

ಆ) 2013–14ನೇ ಸಾಲಿನಲ್ಲಿ ಯಾವ ಯಾವ ತಾಲ್ಲೂಕಿಗೆ ಹೆಚ್ಚುವರಿಯಾಗಿ ಗುರಿಯನ್ನು ನಿಗದಿಪಡಿಸಲಾಗಿದೆ;

ಇ) 2013–14ನೇ ಸಾಲಿನಲ್ಲಿ ಹೆಚ್ಚುವರಿಯಾಗಿ ಗುರಿ ಮಂಜೂರು ಮಾಡದ ತಾಲ್ಲೂಕುಗಳಿಗೆ 2014–15ನೇ ಸಾಲಿಗೆ ಗುರಿ ನಿಗದಿಪಡಿಸಿರುವ ಬಗ್ಗೆ ಸರ್ಕಾರ ಕ್ರಮಕ್ಕೈಗೊಳ್ಳುವುದೇ;

ಈ) ಹಿರೇಕೆರೂರು ತಾಲ್ಲೂಕಿನಲ್ಲಿ ಬೇಡಿಕೆ ಹೆಚ್ಚಾಗಿರುವುದರಿಂದ 2014–15ನೇ ಸಾಲಿಗೆ ಹೆಚ್ಚಿನ ಗುರಿ ನಿಗದಿಪಡಿಸಲಾಗುವುದೇ?

ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ)

	ಮಂಜೂರು ಮಾಡಿರುವ ಕೊಳವೆ ಬಾವಿಗಳ ಸಂಖ್ಯೆ
ಪರಿಶಿಷ್ಟ ಜಾತಿ	**5523**
ಪರಿಶಿಷ್ಟ ಪಂಗಡ	**2860**

ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

ಆ) ಮತ್ತು ಇ) ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ:– 2013–14ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ ಮತ್ತು ಪರಿಶಿಷ್ಟ ಜಾತಿ ಜನಸಂಖ್ಯೆ ಆಧಾರದಲ್ಲಿ ಗುರಿ ನಿಗದಿಪಡಿಸಿದೆ. ಹೆಚ್ಚುವರಿ ಗುರಿಯನ್ನು ನಿಗದಿಪಡಿಸಿರುವುದಿಲ್ಲ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ:– ಇಲ್ಲ.

ಗಂಗಾ ಕಲ್ಯಾಣ ಯೋಜನೆಗೆ ನಿಗಧಿಯಾಗಿರುವ ಅನುದಾನಕ್ಕೆ ಅನುಗುಣವಾಗಿ ಹಾಗೂ ವಿಧಾನ ಸಭಾ ಕ್ಷೇತ್ರದ ಪರಿಶಿಷ್ಟ ಪಂಗಡದ ಜನಸಂಖ್ಯೆ ಅನುಗುಣವಾಗಿ ಗುರಿ ನಿಗಧಿಪಡಿಸಲಾಗಿದೆ. ಹೆಚ್ಚುವರಿ ಅನುದಾನ ಬಿಡುಗಡೆಯಾದಲ್ಲಿ, ಹೆಚ್ಚುವರಿ ಗುರಿ ನೀಡಲು ಕ್ರಮ ವಹಿಸಲಾಗುವುದು.

ಈ) ಅನುದಾನದ ಲಭ್ಯತೆ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಂಖ್ಯೆ ಅನುಗುಣವಾಗಿ ಗುರಿ ನಿಗಧಿಪಡಿಸಲಾಗುವುದು.

ಆಸ್ಪತ್ರೆಗಳ ಸುಧಾರಣೆ

2766 (3232), ಶ್ರೀ ಬಸವರಾಜ ಎಸ್. ಬೊಮ್ಮಾಯಿ (ಶಿಗ್ಗಾಂವ್)

ಅ) ರಾಜ್ಯದಲ್ಲಿ 100 ಹಾಸಿಗೆಗಳ ಆಸ್ಪತ್ರೆಗಳು ಎಷ್ಟು; ಆಸ್ಪತ್ರೆಗಳಲ್ಲಿ ಖಾಲಿಯಿರುವ ವಿವಿಧ ಹುದ್ದೆಗಳು ಎಷ್ಟು; (ವಿವರಗಳನ್ನು ನೀಡುವುದು);

ಆ) 100 ಹಾಸಿಗೆಯ ಆಸ್ಪತ್ರೆಗಳ ಸುಧಾರಣೆಗಳ ಬಗ್ಗೆ ಸರ್ಕಾರದ ಕಾರ್ಯಕ್ರಮಗಳೇನು; ಅವುಗಳಿಗಾಗಿ ಪ್ರಸ್ತುತ ವರ್ಷ ಬಜೆಟ್‌ನಲ್ಲಿ ಇಟ್ಟಿರುವ ಮೊತ್ತ ಎಷ್ಟು;

ಇ) ರಾಜ್ಯದಲ್ಲಿ ಇರುವಂತಹ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟು; ಅವುಗಳನ್ನು ಖಾಸಗಿ ಸಹಭಾಗಿತ್ವದಲ್ಲಿ ನಡೆಸಲು ಸರ್ಕಾರದ ಕಾರ್ಯ ಯೋಜನೆ ಇದೆಯೇ?

ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)